ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಗುರುವಾರ, ದಿನಾಂಕ : 10 ನೇ ಡಿಸೆಂಬರ್, 2020

ಕೃಷ್ಣ ಮೇಲ್ದಂಡೆ ಯೋಜನೆಯ ಭೂ-ಸ್ವಾಧೀನ ಪ್ರಕ್ರಿಯೆಯ ಕುರಿತು

ಶ್ರೀ ನಿರಾಣಿ ಹಣಮಂತ್ ರುದ್ರಪ್ಪ(ಪದವೀಧರರ ಕ್ಷೇತ್ರ) -

325 (430) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಕೃಷ್ಣಾ ಮೇಲ್ದಂಡೆ ಯೋಜನೆಯ ಅನುಷ್ಠಾನಕ್ಕಾಗಿ ಹೊಸದಾಗಿ ನಿರ್ಮಿಸುತ್ತಿರುವ 20 ಪುನರ್ ವಸತಿ ಮತ್ತು ಪುನರ್ ನಿರ್ಮಾಣ ಕೇಂದ್ರಗಳಿಗಾಗಿ ಎಷ್ಟು ಎಕರೆ ಜಮೀನುಗಳನ್ನು ಭೂ-ಸ್ವಾಧೀನ ಪಡಿಸಿಕೊಳ್ಳಲಾಗಿದೆ; ಅವುಗಳು ಯಾವ ಹಂತದಲ್ಲಿವೆ;

(ಆ) ಉಳಿದ ಗ್ರಾಮಗಳಿಗೆ ಯಾವ ಕಾಲಮಿತಿಯಲ್ಲಿ ಭೂ-ಸ್ವಾಧೀನ ಪ್ರಕ್ರಿಯೆಯನ್ನು ಪೂರ್ಣಗೊಳಿಸಲಾಗುವುದು;

(ಇ) ಯಾವ ಯಾವ ಗ್ರಾಮಗಳು ಸದರಿ ಭೂ-ಸ್ವಾಧೀನ ವ್ಯಾಪ್ತಿಯಲ್ಲಿವೆ; (ಗ್ರಾಮವಾರು ಸಂಪೂರ್ಣ ವಿವರವನ್ನು ನೀಡುವುದು)

(ಈ) ಭೂ-ಸ್ವಾಧೀನ ಪಡಿಸಿಕೊಂಡ ಜಮೀನುಗಳಿಗೆ ಪರಿಹಾರ ಒದಗಿಸಲಾಗಿದೆಯೇ; ಇಲ್ಲವಾದಲ್ಲಿ, ಯಾವ ಕಾಲಮಿತಿಯಲ್ಲಿ ಸಂತ್ರಸ್ಥರಿಗೆ ಪರಿಹಾರ ನೀಡಲಾಗುವುದು;

(ಉ) ಭೂ-ಸ್ವಾಧೀನ ಪಡಿಸಿಕೊಂಡ ಪುನರ್ ವಸತಿ ಕೇಂದ್ರಗಳಲ್ಲಿ ಅಭಿವೃದ್ಧಿ ಕಾರ್ಯಗಳು ಪ್ರಾರಂಭವಾಗಿವೆಯೇ; ಹಾಗಿದ್ದಲ್ಲಿ, ಅವುಗಳು ಯಾವ ಹಂತದಲ್ಲಿವೆ? (ಪುನರ್ ವಸತಿ ಕೇಂದ್ರವಾರು ಸಂಪೂರ್ಣ ವಿವರ ನೀಡುವುದು)